ಜೆಎಸ್‌ಎಸ್ ಮಹಾವಿದ್ಯಾಪೀಠ

# ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು

(ಮೈಸೂರು ವಿಶ್ವವಿದ್ಯಾನಿಲಯದಿಂದ ಸ್ವಾಯತ್ತತೆ ಪಡೆದಿದೆ * ನ್ಯಾಕ್‌ನಿಂದ 'ಎ' ದರ್ಜೆ ಮಾನ್ಯತೆ ಪಡೆದಿದೆ)

'ಉತ್ಕೃಷ್ಟತಾ ಅಂತಃಸಾಮರ್ಥ್ಯ ಉಳ್ಳ' ಕಾಲೇಜು ಎಂದು ಯುಜಿಸಿಯಿಂದ ಗುರುತಿಸಲ್ಪಟ್ಟಿದೆ

ಊಟಿರಸ್ತೆ, ಮೈಸೂರು-570 025, ಕರ್ನಾಟಕ

☎ 0821-2548236 & 2548380 Fax: 0821-2548238 E-mail: jssautonomous@gmail.com

**ಪ್ರಕಟಣೆಯ ಕೃಪೆಗಾಗಿ** ದಿನಾಂಕ : 25.10.2016

## ಸಾಮಾಜಿಕ ಪರಿವರ್ತನೆಗೆ ಮೌಲ್ಯಾಧಾರಿತ ಶಿಕ್ಷಣವೇ ಭದ್ರಬುನಾದಿ

– ಡಾ. ಡಿ.ಪಿ. ಸಿಂಗ್

ಮೈಸೂರು ಅಕ್ಟೋಬರ್ ೨೫, ನಗರದ ಬಿ.ಎನ್ ರಸ್ತೆಯಲ್ಲಿರುವ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನಲ್ಲಿ ಒಂಬತ್ತನೆಯ ಪದವೀಧರರ ದಿನಾಚರಣೆಯ ಕಾರ್ಯಕ್ರಮವನ್ನು ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮಿಗಳವರ ಸಾನ್ನಿಧ್ಯದಲ್ಲಿ ಆಯೋಜಿಸಲಾಗಿತ್ತು.

ಸಮಾರಂಭದಲ್ಲಿ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಿದ ನ್ಯಾಕ್‌ನ (NAAC) ನಿರ್ದೇಶಕರಾದ ಪ್ರೊ. ಡಿ.ಪಿ. ಸಿಂಗ್ ಅವರು "ಜೆಎಸ್‌ಎಸ್ ಕಾಲೇಜು ಮೌಲ್ಯಾಧಾರಿತ ಶಿಕ್ಷಣಕ್ಕೆ ಭದ್ರಬುನಾದಿಯನ್ನು ಒದಗಿಸಿದ್ದು, ಆ ಮೂಲಕ ಸಾಮಾಜಿಕ ಪರಿವರ್ತನೆಗೆ ಕಾರಣವಾಗುತ್ತಿರುವುದು ಅಭಿನಂದನೀಯ" ಎಂದು ನುಡಿದರು. "ಇಂದು ಭಾರತದ ಜನಸಂಖ್ಯೆಯಲ್ಲಿ ಶೇಕಡ ಅರ್ಧದಷ್ಟು ಜನತೆ ೨೫ ವರ್ಷಕ್ಕಿಂತ ಕಡಿಮೆ ವಯೋಮಾನದವರಿದ್ದಾರೆ. ನಮ್ಮ ಸುತ್ತಲ ಜಗತ್ತಿನಲ್ಲಿ ನಡೆಯುತ್ತಿರುವ ಕ್ಷಿಪ್ರಗತಿಯ ಬದಲಾವಣೆಗಳು ಯುವ ನಾಯಕತ್ವವನ್ನೇ ಆಧರಿಸಿವೆ. ಭವಿಷ್ಯವು ಯುವಜನತೆಗಾಗಿಯೇ ಕಾದಿದೆ. ಮುಂದಿನ ದಿನಗಳಲ್ಲಿ ಭಾರತದ ಸಮಗ್ರ ಬೆಳವಣಿಗೆಗೆ ಯುವ ಜನತೆಯೇ ಮಾರ್ಗಕಾರರಾಗಲಿದ್ದಾರೆ. ನಮ್ಮ ರಾಷ್ಟ್ರವನ್ನು ವಿಶ್ವದ ನಾಯಕ ಸ್ಥಾನಕ್ಕೆ ಕೊಂಡೊಯ್ಯಬೇಕಾದ ಕನಸನ್ನು ಕಂಡಿದ್ದ ಸ್ವಾಮಿ ವಿವೇಕನಂದರ ಪರಿಕಲ್ಪನೆಗಳಿಗೆ ಯುವ ಸಮೂಹ ಸ್ಪಂದಿಸಬೇಕಾಗಿದೆ. ಮೊದಲಿನಿಂದಲೂ ನಮ್ಮ ರಾಷ್ಟ್ರವು ಮೌಲ್ಯಾಧಾರಿತ ಶಿಕ್ಷಣಕ್ಕೆ ವಿಶ್ವವ್ಯಾಪಿ ಗೌರವವನ್ನು ಪಡೆದುಕೊಂಡಿತ್ತು. ನಮ್ಮಲ್ಲಿನ ಪ್ರಾಚೀನ ವಿಶ್ವವಿದ್ಯಾಲಯಗಳಾದ ನಳಂದ, ತಕ್ಷಿಲ ಮೊದಲಾದವುಗಳಲ್ಲಿ ಜಗತ್ತಿನ ಬೇರೆಬೇರೆ ಭಾಗದ ವಿದ್ಯಾರ್ಥಿಗಳು ಅಧ್ಯಯನ ಮಾಡಲೆಂದು ಬರುತ್ತಿದ್ದರು" ಎಂದು ನೆನಪಿಸಿಕೊಳ್ಳುತ್ತಾ "ಇಂದು ಶಿಕ್ಷಣ ಸಂಸ್ಥೆಗಳು ವಿದ್ಯಾರ್ಥಿಗಳಲ್ಲಿ ಗುಣ ಮತ್ತು ಮೌಲ್ಯಗಳ ಅರಿವನ್ನು ಮೂಡಿಸುವ ಮೂಲಕ ಸಮಾಜ ಮತ್ತು ರಾಷ್ಟ್ರ ಸೇವೆಗೆ ಅವರನ್ನು ಸನ್ನದ್ಧಗೊಳಿಸಬೇಕಿದೆ. ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಯಲ್ಲಿ ಕ್ರೀಡೆ, ಯೋಗ, ಕಲೆ, ಸಂಸ್ಕೃತಿ ಮತ್ತು ಪಠ್ಯೇತರ ಚಟುವಟಿಕೆಗಳು ಸಹ ಮಹತ್ತರ ಪಾತ್ರವಹಿಸುತ್ತವೆ. ಹಾಗಾಗಿ ಶಿಕ್ಷಣ ಸಂಸ್ಥೆಗಳು ಅವುಗಳ ಉತ್ತೇಜನಕ್ಕೆ ಅಗತ್ಯ ಸೌಲಭ್ಯವನ್ನು ಒದಗಿಸಿಕೊಡಬೇಕಿದೆ" ಎಂದರು.

ಜೆಎಸ್‌ಎಸ್ ಮಹಾವಿದ್ಯಾಪೀಠದ ಮುಖ್ಯ ನಿರ್ವಾಹಕ ಕಾರ್ಯದರ್ಶಿಗಳಾದ ಡಾ. ಸಿ. ಜಿ. ಬೆಟ್ಸೂರುಮಠ ಅವರು ಪದವೀಧರ ವಿದ್ಯಾರ್ಥಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು. ಇದೇ ಸಂದರ್ಭದಲ್ಲಿ ಅತಿ ಹೆಚ್ಚು ಅಂಕ ಪಡೆದ ಸ್ನಾತಕ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳನ್ನು ಪುರಸ್ಕರಿಲಾಯಿತು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಜೆಎಸ್‌ಎಸ್ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ. ಬಿ. ಸುರೇಶ್ ಅವರು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡುತ್ತಾ "ಇಂದಿನ ದಿನಮಾನಗಳಲ್ಲಿ ನಮ್ಮ ಸುತ್ತಮುತ್ತಲು ಸಾಗರದಷ್ಟು ಸವಾಲುಗಳಿವೆ, ಜೊತೆಗೆ ಆಕಾಶದಷ್ಟು ಅವಕಾಶಗಳೂ ಇವೆ. ಸವಾಲುಗಳು ಬಂದಾಗ ಧೈರ್ಯದಿಂದ ಸ್ವೀಕರಿಸಿ-ಎದುರಿಸಿ ಅವಕಾಶಗಳು ಬಂದಾಗ ಕಣ್ಣು ಮುಚ್ಚಿ ಕುಳಿತುಕೊಳ್ಳದೆ ಸಮರ್ಥವಾಗಿ ಸದ್ಬಳಕೆ ಮಾಡಿಕೊಂಡು ವ್ಯಕ್ತಿತ್ವ ಮತ್ತು ಬದುಕನ್ನು ರೂಪಿಸಿಕೊಳ್ಳಬೇಕು" ಎಂದು ಅಭಿಪ್ರಾಯಪಟ್ಟರು.

ಕಾಲೇಜು ಸಮುಚ್ಚಯದ ಮುಖ್ಯ ಕಾರ್ಯನಿರ್ವಾಹಕರಾದ ಪ್ರೊ. ಬಿ.ವಿ. ಸಾಂಬಶಿವಯ್ಯನವರು ಸ್ವಾಗತ ಕೋರಿದರು. ಪ್ರೊ. ಡಿ. ಎಸ್. ಸದಾಶಿವಮೂರ್ತಿಯವರು ಕಾರ್ಯಕ್ರಮವನ್ನು ನಿರೂಪಿಸಿದರು. ಪ್ರಾಂಶುಪಾಲರಾದ ಪ್ರೊ. ಎಂ. ಮಹದೇವಪ್ಪನವರು ವಂದಿಸಿದರು. ಮುಖ್ಯ ಪರೀಕ್ಷಾ ನಿಯಂತ್ರಣಾಧಿಕಾರಿಗಳಾದ ಡಾ.ಬಿ.ಪ್ರಭುಸ್ವಾಮಿ ಅವರು ಉಪಸ್ಥಿತರಿದ್ದರು. ಕು. ಲಾಸ್ಯ ಪ್ರಾರ್ಥಿಸಿದರು.

(ಪ್ರೊ ಎಂ ಮಹದೇವಪ್ಪ)

ಪ್ರಾಂಶುಪಾಲರು
ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು
ಊಟಿ ರಸ್ತೆ, ಮೈಸೂರು-೨೫

ಗೆ,
ಸಂಪಾದಕರು
____________________
____________________